ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಶುಕ್ರವಾರ, ದಿನಾಂಕ : 29 ನೇ ಜನವರಿ, 2021

ರಾಜ್ಯದಲ್ಲಿನ ವಿಕಲಚೇತನರಿಗಾಗಿ ನಡೆಸುತ್ತಿರುವ ಶಾಲೆಗಳ ಬಗ್ಗೆ

ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

08 (51) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ರಾಜ್ಯದಲ್ಲಿ ವಿಕಲಚೇತನರಿಗಾಗಿ ಸರ್ಕಾರವು ಸಾಕಷ್ಟು ಅಭಿವೃದ್ಧಿ ಕ್ರಮಗಳನ್ನು ಕೈಗೊಂಡಿದ್ದರೂ, ಅದು ಫಲಾನುಭವಿಗಳಿಗೆ ತಲುಪುತ್ತಿಲ್ಲವೆಂದು ವರದಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ರಾಜ್ಯದಲ್ಲಿ ಸರ್ಕಾರ ಮತ್ತು ಸರ್ಕಾರೇತರ ಸಂಸ್ಥೆಗಳಿಂದ ವಿಕಲಚೇತನರಿಗಾಗಿ ನಡೆಸುತ್ತಿರುವ ಶಾಲೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಇಂತಹ ಶಾಲೆಗಳಲ್ಲಿ ಆಯಾ ವಿಷಯದಲ್ಲಿ ಪರಿಣತಿ ಹೊಂದಿರುವ ಶಿಕ್ಷಕರನ್ನು ನೇಮಕ ಮಾಡಲಾಗಿದೆಯೇ;

(ಈ) ಇಂತಹ ವಿಶೇಷ ಶಾಲೆಗಳಲ್ಲಿ ಶಿಕ್ಷಕರ ಅಭಾವವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಬಂದಿದ್ದಲ್ಲಿ, ಕುಂದುಕೊರತೆಗಳ ಪರಿಹಾರಕ್ಕಾಗಿ ಸರ್ಕಾರ ತೆಗೆದುಕೊಂಡ ಕ್ರಮಗಳೇನು?